ಪುತ್ತೂರಿನಲ್ಲಿ ಗ್ರಾಮಾಂತರ ಪೋಲೀಸ್ ಠಾಣೆ ಮಾಡುವುದರ ಬಗ್ಗೆ

೨೪೭೭. ಶ್ರೀ ವಿನಯಕುಮಾರ್ ಸೊರಕೆ (ಪುತ್ತೂರು).—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಪುತ್ತೂರು ತಾಲ್ಲೂಕಿನಲ್ಲಿ ಗ್ರಾಮಾಂತರ ಪೋಲೀಸ್ ಠಾಣೆ ಮಾಡುವ ಬಗ್ಗೆ ಇಲಾಖಾ ಮಟ್ಟದಿಂದ ಪ್ರಸ್ತಾವ ಬಂದಿರುವುದು ನಿಜವೇ ?

ಆ) ಹಾಗಿದ್ದಲ್ಲಿ ಪುತ್ತೂರಿನಲ್ಲಿ ಗ್ರಾಮಾಂತರ ಪೋಲೀಸ್ ಠಾಣೆ ತೆರೆಯುವ ಬಗ್ಗೆ ಸರ್ಕಾರವು ಕೈಕೊಂಡ ಕ್ರಮವೇನು ?

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಪುತ್ತೂರು ಬಸ್ಸು ನಿಲ್ದಾಣ ದುರಸ್ತಿ ಕೆಲಸದ ಬಗ್ಗೆ

೨೪೮೬. ಶ್ರೀ ವಿನಯಕುಮಾರ್ ಸೊರಕೆ (ಪುತ್ತೂರು) —ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣ ಇರುವುದು ನಿಜವೇ ?

ಆ) ಸದರಿ ನಿಲ್ದಾಣದಲ್ಲಿ ಬಸ್‌ಗಳನ್ನು ನಿಲ್ಲಿಸಲು ಪ್ಲಾಟ್‌ಫಾರಂ ಹಾಗೂ ನಿಲ್ದಾಣದಲ್ಲಿ ಕಾಂಕ್ರೀಟ್ ಮಾಡಿದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಇ) ಬಂದಿದ್ದಲ್ಲಿ ನಿಲ್ದಾಣದ ಮೇಲ್ಕಾಣಿಸಿದ ದುರಸ್ತಿ ಕೆಲಸಗಳನ್ನು ಕೈಗೊಳ್ಳಲು ಸರ್ಕಾರವು ಆಲೋಚಿಸಿದೆಯೇ ?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಾರಿಗೆ ಮಂತ್ರಿಗಳು).—

ಅ) ನಿಜ.

ಆ) ಮತ್ತು ಇ) ಪ್ಲಾಟ್‌ಫಾರಂ ಮಾಡಲಾಗಿದೆ. ಕಾಂಕ್ರೀಟ್ ಮಾಡಲು ಈ ವರ್ಷ ತೆಗೆದುಕೊಳ್ಳಲಾಗುವುದು.